All India Radio: Bangalore
Regional Bulletin In Kannada

**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

26.02.2025 6.40 P.M.

**<><><><>**

ಮುಖ್ಯಾಂಶಗಳು

- ನವಲಿ ಅಣೆಕಟ್ಟು ವಿಚಾರ; ಆಂಧ್ರಪ್ರದೇಶ ಮುಖ್ಯಮಂತ್ರಿ ಜೊತೆ ಮತ್ತೊಮ್ಮೆ ಚರ್ಚೆ - ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್
- ಅಕ್ರಮ ಗಣಿಗಾರಿಕೆ ಪ್ರಕರಣ; ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ವಿರುದ್ಧ ವಿಚಾರಣೆಗೆ ರಾಜ್ಯಪಾಲರ ಅನುಮತಿ ಕೋರಿದ ಲೋಕಾಯುಕ್ತ
- ಮಹಾರಾಷ್ಟ್ರ ಕರ್ನಾಟಕ ಬಸ್ ಸಂಚಾರ ಮರು ಆರಂಭಿಸುವಂತೆ ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಸರ್ಕಾರಕ್ಕೆ ಸಲಹೆ
- ಚಿಕ್ಕಮಗಳೂರು ಕಾಡ್ಗಿಚ್ಚಿನಿಂದ ಕಾಫಿ ತೋಟ, ಅರಣ್ಯ ಪ್ರದೇಶ ನಾಶ; ಅರಣ್ಯ ಇಲಾಖೆಯಿಂದ ಬೆಂಕಿ ನಂದಿಸುವ ಕಾರ್ಯಾಚರಣೆ
- ಕರಾವಳಿಯ ಮೂರು ಜಿಲ್ಲೆಗಳಿಗೆ ಉಷ್ಣ ಅಲೆಯ ಎಚ್ಚರಿಕೆ ನೀಡಿದ ಹವಾಮಾನ ಇಲಾಖೆ; ಕಾರವಾರದಲ್ಲಿ ಗರಿಷ್ಠ ೩೮ ಡಿಗ್ರಿ ಉಷ್ಣಾಂಶ ದಾಖಲು

<><><><>

ರಾಜ್ಯದ ೧೧ ಸಾವಿರ ಕೋಟಿ ರೂಪಾಯಿ ಮೊತ್ತದ ನೀರಾವರಿ ಯೋಜನೆಗಳ ಬಗ್ಗೆ ಕೇಂದ್ರ ಜಲಶಕ್ತಿ ಸಚಿವರ ಬಳಿ ಪ್ರಸ್ತಾವನೆ ಮಂಡಿಸಲಾಗಿದೆ ಎಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಮೇಕೆದಾಟು ಯೋಜನೆ ವಿಚಾರದಲ್ಲಿ ಕೇಂದ್ರ ಸರ್ಕಾರದ ನಿಲುವು ಸ್ಪಷ್ಟಪಡಿಸುವಂತೆ ಪ್ರಸ್ತಾವನೆ ಸಲ್ಲಿಸಲಾಗಿದೆ ಎಂದು ಹೇಳಿದ್ದಾರೆ. ತುಂಗಭದ್ರಾ ಅಣೆಕಟ್ಟೆನಲ್ಲಿ ಹೂಳು ತುಂಬಿಕೊಂಡಿರುವ ಹಿನ್ನೆಲೆ ಸುಮಾರು ೩೦ ಟಿಎಂಸಿ ನೀರು ನಷ್ಟವಾಗುತ್ತಿದ್ದು, ನವಲಿ ಬಳಿ ಸಮಾನಾಂತರ ಅಣೆಕಟ್ಟು ನಿರ್ಮಾಣ ಮಾಡುವ ಯೋಜನೆ ಇದೆ. ಆಂಧ್ರಪ್ರದೇಶ ಹಾಗೂ ತೆಲಂಗಾಣ ಸಚಿವರು ಹಾಗೂ ಅಧಿಕಾರಿಗಳ ಜೊತೆ ಈ ಕುರಿತಂತೆ ಪ್ರತ್ಯೇಕ ಸಭೆ ನಡೆಸಲಾಗಿದೆ ಎಂದು ತಿಳಿಸಿದ್ದಾರೆ. ನವಲಿ ಅಣೆಕಟ್ಟು ವಿಚಾರವಾಗಿ ಆಂಧ್ರಪ್ರದೇಶ ಮುಖ್ಯಮಂತ್ರಿ ಜೊತೆ ಮಾರ್ಚ್ ಮೊದಲ ವಾರದಲ್ಲಿ ಮತ್ತೊಮ್ಮೆ ಚರ್ಚಿಸಲಾಗುವುದು ಎಂದು ಹೇಳಿದ್ದಾರೆ. ಇದೇ ವೇಳೆ, ತೆಲಂಗಾಣಕ್ಕೆ ನಾರಾಯಣಪುರ ಜಲಾಶಯದಿಂದ ಒಂದು ಟಿಎಂಸಿ ನೀರು ಬಿಟ್ಟಿರುವ ಬಗ್ಗೆ ಉಪಮುಖ್ಯಮಂತ್ರಿ ಸಮರ್ಥಿಸಿಕೊಂಡಿದ್ದಾರೆ. ರಾಜ್ಯಕ್ಕೆ ಅವಶ್ಯಕತೆ ಇದ್ದಾಗ ತೆಲಂಗಾಣ ಸರ್ಕಾರದಿಂದಲೂ ಸಹಾಯವಾಗಿದೆ ಎಂದು ತಿಳಿಸಿದ್ದಾರೆ.

<><><><>

ಅಕ್ರಮ ಗಣಿಗಾರಿಕೆ ಪ್ರಕರಣದಲ್ಲಿ ಕೇಂದ್ರ ಸಚಿವ ಹೆಚ್.ಡಿ ಕುಮಾರಸ್ವಾಮಿ ವಿರುದ್ಧ ವಿಚಾರಣೆಗೆ ಅನುಮತಿ ನೀಡುವಂತೆ ಲೋಕಾಯುಕ್ತ ವಿಶೇಷ ತನಿಖಾ ತಂಡ ರಾಜ್ಯಪಾಲರ ಅನುಮತಿ ಕೇಳಿದೆ ಎಂದು ಐಎಎನ್ ಎಸ್ ಸುದ್ದಿ ಸಂಸ್ಥೆ ವರದಿ ಮಾಡಿದೆ. ಕುಮಾರಸ್ವಾಮಿ ಅವರು ೨೦೦೬ ರಿಂದ

೨೦೦೮ ರವರೆಗೆ ಮುಖ್ಯಮಂತ್ರಿ ಆಗಿದ್ದ ಅವಧಿಯಲ್ಲಿ ಬಳ್ಳಾರಿ ಜಿಲ್ಲೆಯ ಸಂಡೂರು ತಾಲೂಕಿನ ಖಾಸಗಿ ಕಂಪನಿಗೆ ೫೫೦ ಎಕರೆ ಗಣಿಗಾರಿಕೆ ಗುತ್ತಿಗೆಯನ್ನು ಕಾನೂನುಬಾಹಿರವಾಗಿ ಅನುಮೋದಿಸಿದ್ದಾರೆ ಎಂಬ ಆರೋಪ ಕೇಳಿ ಬಂದಿತ್ತು. ಹೆಚ್‌ಡಿಕೆ ವಿಚಾರಣೆಗೆ ಅನುಮತಿ ಕೋರಿ ಈ ಹಿಂದೆಯೇ ರಾಜ್ಯಪಾಲರ ಬಳಿ ಅನುಮತಿ ಕೇಳಲಾಗಿತ್ತು. ದೋಷಾರೋಪ ಪಟ್ಟಿಯನ್ನು ಇಂಗ್ಲಿಷ್‌ಗೆ ತರ್ಜುಮೆ ಮಾಡಲು ರಾಜ್ಯಪಾಲರು ಸೂಚಿಸಿದ್ರು. ಅದರಂತೆ ೫ ಸಾವಿರಕ್ಕೂ ಹೆಚ್ಚು ಪುಟಗಳ ದೋಷಾರೋಪ ಪಟ್ಟಿಯನ್ನು ಸಂಪೂರ್ಣವಾಗಿ ಇಂಗ್ಲಿಷ್ ಗೆ ತರ್ಜುಮೆ ಮಾಡಿ ರಾಜ್ಯಪಾಲರಿಗೆ ಸಲ್ಲಿಸಲಾಗಿದೆ.

<><><>

ಬೆಳಗಾವಿಯಲ್ಲಿ ನಿರ್ವಾಹಕರ ಮೇಲಿನ ಹಲ್ಲೆ ಪ್ರಕರಣ ನೆಪದಲ್ಲಿ ಎರಡು ರಾಜ್ಯಗಳ ಬಸ್‌ಗಳ ಸ್ಥಗಿತ ಸರಿಯಲ್ಲ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದ್ದಾರೆ. ಹುಬ್ಬಳ್ಳಿಯಲ್ಲಿ ಮಾತನಾಡಿದ ಅವರು, ಈ ಪ್ರಕರಣದಲ್ಲಿ ಜನ ಸಾಮಾನ್ಯರಿಗೆ ತೊಂದರೆ ಆಗಬಾರದು. ಈ ನಿಟ್ಟಿನಲ್ಲಿ ಉಭಯ ಸರ್ಕಾರಗಳು ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದ್ದಾರೆ.

ಇದೇ ವೇಳೆ ರಾಜ್ಯ ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದ ಅವರು, ರಾಜ್ಯದಲ್ಲಿ ಎಲ್ಲಾ ದರಗಳು ಹೆಚ್ಚಾಗಿವೆ ಎಂದು ಹೇಳಿದ್ದಾರೆ. ಉದ್ಯಮಿಗಳ ಬಗ್ಗೆ ಪ್ರಿಯಾಂಕ್ ಖರ್ಗೆ ಹೇಳಿಕೆ ಸರಿಯಲ್ಲ ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ.

<><><>

ವಿಧಾನಸೌಧ ಆವರಣದಲ್ಲಿ ಇದೇ ಮೊಟ್ಟ ಮೊದಲ ಬಾರಿಗೆ ನಾಳೆಯಿಂದ ಮಾರ್ಚ್ ೨ ರವರೆಗೆ ನಾಲ್ಕು ದಿನಗಳ ಕಾಲ ಪುಸ್ತಕ ಮೇಳ ಆಯೋಜನೆ ಮಾಡಲಾಗಿದ್ದು, ಸಾರ್ವಜನಿಕರಿಗೆ ಮುಕ್ತ ಅವಕಾಶ ನೀಡಲಾಗಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ನಾಳೆ ಸಂಜೆ ಬೃಹತ್ ಪುಸ್ತಕ ಮೇಳವನ್ನು ಉದ್ಘಾಟನೆ ಮಾಡಲಿದ್ದಾರೆ. ಕಾರ್ಯಕ್ರಮದಲ್ಲಿ ಅನೇಕ ಬರಹಗಾರರು ತಮ್ಮ ಕೃತಿಗಳನ್ನು ಬಿಡುಗಡೆ ಮಾಡಲಿದ್ದಾರೆ. ಮಕ್ಕಳ ಸಾಹಿತ್ಯ, ಸಿನಿಮಾ, ಸಂವಿಧಾನ ಮತ್ತು ಕನ್ನಡ ಸಾಹಿತ್ಯದಂತಹ ವಿಷಯಗಳ ಕುರಿತು ಬರಹಗಾರರು ಮತ್ತು ತಜ್ಞರೊಂದಿಗೆ ಪ್ರತಿದಿನ ಸಂವಾದ ನಡೆಯಲಿದೆ. ಈ ಹಿನ್ನೆಲೆಯಲ್ಲಿ ವಿಧಾನಸೌಧದ ಆವರಣದಲ್ಲಿ ಆಯೋಜಿಸಿರುವ ಪುಸ್ತಕ ಮೇಳದ ಸಿದ್ಧತಾ ಕಾರ್ಯವನ್ನು ಸಭಾಧ್ಯಕ್ಷರಾದ ಯು.ಟಿ.ಖಾದರ್ ಹಾಗೂ ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಪರಿಶೀಲನೆ ನಡೆಸಿದರು.

<><><>

ಬೆಂಗಳೂರಿನಲ್ಲಿ ನಾಳೆಯಿಂದ ಮೂರು ದಿನಗಳ ಕಾಲ ಗೆಫೆಕ್ಸ್ ಶೃಂಗಸಭೆ ನಡೆಯಲಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಶೃಂಗಸಭೆಯನ್ನು ಉದ್ಘಾಟಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಕೇಂದ್ರ ಸರ್ಕಾರ ಪ್ರಸಾರ ಮತ್ತು ತಂತ್ರಜ್ಞಾನ ಸಚಿವಾಲಯದ ಕಾರ್ಯದರ್ಶಿ ಸಂಜಯ್ ಜಾಜು ಭಾಗವಹಿಸಲಿದ್ದಾರೆ. ಸುಮಾರು ೨೦ ಸಾವಿರಕ್ಕೂ ಅಧಿಕ ಮಂದಿ ಈ ಶೃಂಗಸಭೆಯಲ್ಲಿ ಭಾಗವಹಿಸುವ ನಿರೀಕ್ಷೆಯಿದೆ. ಕರ್ನಾಟಕದ ಮಾಹಿತಿ ತಂತ್ರಜ್ಞಾನ ಇಲಾಖೆ ಆಯೋಜಿಸಿರುವ ಭಾರತದ ಪ್ರಧಾನ ಎವಿಜಿಸಿ-ಎಕ್ಸ್‌ಆರ್ ಸಮ್ಮೇಳನವು ಅನಿಮೇಶನ್, ದೃಶ್ಯಪರಿಣಾಮಗಳು, ಗೇಮಿಂಗ್, ಕಾಮಿಕ್ಸ್ ಮತ್ತು ಸಂವಹನ ತಂತ್ರಜ್ಞಾನದ ಬಗ್ಗೆ ಬೆಳಕು ಚೆಲ್ಲಲಿದೆ. ಇದೇ ೨೭ರಿಂದ ಮಾರ್ಚ್ ೧ರವರೆಗೆ ಸಮ್ಮೇಳನ ಆಯೋಜಿಸಲಾಗಿದೆ.

<><><><>

ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆ ಹಾಗು ಕಳಸ ತಾಲೂಕುಗಳಲ್ಲಿ ಉಂಟಾದ ಪ್ರತ್ಯೇಕ ಕಾಡ್ಗಿಚ್ಚು ಪ್ರಕರಣಗಳಲ್ಲಿ ೧೫ ಎಕರೆ ಕಾಫಿ ತೋಟ ಮತ್ತು ೨೫ ಕ್ಕು ಹೆಚ್ಚು ಎಕರೆ ಅರಣ್ಯ ಪ್ರದೇಶ ನಾಶವಾಗಿದೆ ಎಂದು ಅರಣ್ಯ ಇಲಾಖೆ ತಿಳಿಸಿದೆ. ಬಾಳೂರು ಮೀಸಲು ಅರಣ್ಯ ಪ್ರದೇಶದ ದೇವರಮನೆ ಗುಡ್ಡದಲ್ಲಿ ಕಾಡ್ಗಿಚ್ಚು ಉಂಟಾಗಿ ೧೦ ಎಕರೆಗೂ ಹೆಚ್ಚು ಅರಣ್ಯ ಪ್ರದೇಶ ಸುಟ್ಟು ನಾಶವಾಗಿದೆ. ಕುಂದೂರು ಸಮೀಪದ ಕಣೇಗದ್ದೆ ಗ್ರಾಮದಲ್ಲಿ ಕಾಫಿತೋಟಕ್ಕೆ ಬೆಂಕಿ ಬಿದ್ದು ಸುಮಾರು ೧೫ ಎಕರೆ ಕಾಫಿ ತೋಟ ನಾಶವಾಗಿದೆ. ಮೂಡಿಗೆರೆ ಅಗ್ನಿ ಶಾಮಕದಳ ಸಿಬ್ಬಂದಿ ಭೇಟಿ ನೀಡಿ ಬೆಂಕಿ ನಂದಿಸಿದ್ದಾರೆ. ಕಳಸ ತಾಲೂಕು ಬಲಿಗೆ ಅರಣ್ಯದಲ್ಲಿ ಕಾಡ್ಗಿಚ್ಚು ಉಂಟಾಗಿದ್ದು ಸಾಕಷ್ಟು ಅರಣ್ಯ ನಾಶವಾಗಿದೆ. ಅರಣ್ಯಾಧಿಕಾರಿಗಳಿಂದ ಬೆಂಕಿ ನಂದಿಸುವ ಕಾರ್ಯ ನಡೆಯುತ್ತಿದೆ.

<><><><>

ಕರ್ನಾಟಕದ ಮೂರು ಜಿಲ್ಲೆಗಳಿಗೆ ಉಷ್ಣ ಅಲೆಯ ಎಚ್ಚರಿಕೆಯನ್ನು ಹವಾಮಾನ ಇಲಾಖೆ ನೀಡಿದೆ. ಉತ್ತರ ಕನ್ನಡ, ದಕ್ಷಿಣ ಕನ್ನಡ ಹಾಗೂ ಉಡುಪಿ ಜಿಲ್ಲೆಗಳಲ್ಲಿ ಬಿಸಿಲ ಝಳ ಹೆಚ್ಚಾಗಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಕಾರವಾರದಲ್ಲಿ ಗರಿಷ್ಠ ೩೮ ಡಿಗ್ರಿ ಸೆಲ್ಸಿಯೆಸ್ ತಾಪಮಾನ ದಾಖಲಾಗಿದೆ. ಕಾರವಾರ, ಪಣಂಬೂರು, ಮಂಗಳೂರು, ಬಾಗಲಕೋಟೆ, ಬೆಳಗಾವಿ, ಚಾಮರಾಜನಗರ, ಚಿಕ್ಕಮಗಳೂರು, ಚಿತ್ರದುರ್ಗ, ದಾವಣಗೆರೆ, ಚಿಂತಾಮಣಿ, ಮಡಿಕೇರಿ, ಶಿವಮೊಗ್ಗ, ಮೈಸೂರು, ಮಂಡ್ಯದಲ್ಲಿ ಗರಿಷ್ಠ ತಾಪಮಾನ ಹೆಚ್ಚಾಗಿದೆ ಎಂದು ಹವಾಮಾನ ಇಲಾಖೆಯ ನಿರ್ದೇಶಕರಾದ ಡಾ.ಸಿ.ಎಸ್.ಪಾಟೀಲ್ ತಿಳಿಸಿದ್ದಾರೆ.

<><><><>

ವಿಜಯನಗರದಲ್ಲಿ ಇದೇ ೨೮ ರಂದು ಹಂಪಿ ಉತ್ಸವ ನಡೆಯಲಿದ್ದು, ಸಿದ್ಧತೆ ಪೂರ್ಣಗೊಂಡಿದೆ. ಜಿಲ್ಲಾ ಉಸ್ತುವಾರಿ ಸಚಿವ ಜಮೀರ್ ಅಹ್ಮದ್ ಖಾನ್ ಇಂದು ಹಂಪಿಯ ಮುಖ್ಯ ವೇದಿಕೆಯ ಸಿದ್ಧತೆ ಪರಿಶೀಲಿಸಿದರು. ಮುಖ್ಯ ವೇದಿಕೆ ಕಮಲ್ ಮಹಲ್ ಮತ್ತು ವಿಜಯ ವಿಠಲ ದೇವಸ್ಥಾನದ ಮಾದರಿಯನ್ನು ಒಳಗೊಂಡಿದೆ. ಸಾಸಿವೆ ಕಾಳು ಗಣಪ ಮತ್ತು ಕಲ್ಲಿನ ತೇರಿನ ಪ್ರತಿಕೃತಿಗಳನ್ನು ವೇದಿಕೆ ಮೇಲೆ ನಿರ್ಮಾಣ ಮಾಡಲಾಗಿದೆ. ವೇದಿಕೆಯ ಎರಡು ಬದಿಗಳಲ್ಲೂ ಸಂಗೀತ ಕಂಬಗಳು ಮತ್ತು ಚಿಕ್ಕ ಮಂಟಪಗಳನ್ನು ನಿರ್ಮಿಸಲಾಗಿದೆ. ಮೂರು ದಿನಗಳ ಕಾಲ ರಾಜೇಶ್ ಕೃಷ್ಣನ್, ಅರ್ಜುನ್ ಜನ್ಯ ಮತ್ತು ಗುರುಕಿರಣ್ ಅವರ ಸಂಗೀತ ರಸಮಂಜರಿ ಕಾರ್ಯಕ್ರಮಗಳು ನಡೆಯಲಿವೆ.

<><><><>

ಭಾರತದ ಸಿ-ಕ್ಯಾಂಪ್ ಮತ್ತು ಫ್ರಾನ್ಸ್‌ನ ಪ್ಯಾರಿಸ್‌ಆಂಟೆ ಕ್ಯಾಂಪಸ್ ನಡುವೆ ಏರ್ಪಟ್ಟ ಸಹಭಾಗಿತ್ವದಿಂದ ಆರೋಗ್ಯ ರಕ್ಷಣಾ ಕ್ಷೇತ್ರಕ್ಕೆ ಅನುಕೂಲವಾಗುವ ವಿಶ್ವಾಸವಿದೆ ಎಂದು ಬೆಂಗಳೂರು ಮೂಲದ ಸಿ-ಕ್ಯಾಂಪ್ ನಿರ್ದೇಶಕರಾದ ಡಾ.ತಸ್ಲಿಮ್ ಆರೀಫ್ ಸೈಯಿದ್ ತಿಳಿಸಿದ್ದಾರೆ. ವಿಶ್ವ ಮಟ್ಟದ ತಜ್ಞರ ಸಹಭಾಗಿತ್ವದೊಂದಿಗೆ ಸಂಶೋಧನೆ ಕೈಗೊಂಡರೆ, ಅತ್ಯಾಧುನಿಕ ತಂತ್ರಜ್ಞಾನದ ನೆರವಿನೊಂದಿಗೆ ಸಮಾಜಕ್ಕೆ ಉಪಯುಕ್ತ ಪರಿಹಾರ ಹುಡಕಲು ಈ ಒಡಂಬಡಿಕೆ ನೆರವಾಗಲಿದೆ ಎಂದು ಸ್ಪಷ್ಟಪಡಿಸಿದ್ದಾರೆ. ಸಿ-ಕ್ಯಾಂಪ್ ಮತ್ತು ಪ್ಯಾರಿಸ್‌ಆಂಟೆ ಕ್ಯಾಂಪಸ್ ನಡುವೆ ಒಡಂಬಡಿಕೆ ಏರ್ಪಟ್ಟಿರುವುದು ಸಂತಸದ ವಿಚಾರ ಎಂದು ಬೆಂಗಳೂರಿನ ಫ್ರಾನ್ಸ್ ರಾಯಭಾರಿ ಕೌನ್ಸಿಲ್ ಜನರಲ್ ಮಾರ್ಕ್ ಲ್ಯಾಮಿ ಹೇಳಿದ್ದಾರೆ. ಎರಡೂ ದೇಶಗಳ ತಜ್ಞರು

ವಿಚಾರವಿನಿಮಯ ನಡೆಸಿದರೆ, ಆರೋಗ್ಯ ರಕ್ಷಣಾ ಕ್ಷೇತ್ರಕ್ಕೆ ಉಪಯುಕ್ತ ಪರಿಹಾರಗಳನ್ನು ಕಂಡು ಹಿಡಿಯಲು ಸಹಕಾರಿಯಾಗಲಿದೆ ಎಂದು ಅಭಿಪ್ರಾಯಪಟ್ಟಿದ್ದಾರೆ.

<><><><>

ರಾಜ್ಯದೆಲ್ಲೆಡೆ ಮಹಾಶಿವರಾತ್ರಿ ಸಡಗರ ಮನೆ ಮಾಡಿದೆ. ಧರ್ಮಸ್ಥಳದ ಮಂಜುನಾಥ ಸ್ವಾಮಿ ದೇವಾಲಯ, ನಂಜನಗೂಡಿನ ನಂಜುಡೇಶ್ವರ ಹಾಗೂ ಚಾಮರಾಜನಗರದ ಮಲೆ-ಮಹದೇಶ್ವರ ಬೆಟ್ಟಕ್ಕೆ ಶಿವರಾತ್ರಿ ಹಿನ್ನೆಲೆಯಲ್ಲಿ ಭಕ್ತರು ಆಗಮಿಸಿ, ಜಾಗರಣೆಯಲ್ಲಿ ಪಾಲ್ಗೊಂಡಿದ್ದಾರೆ. ಉತ್ತರಕನ್ನಡ ಜಿಲ್ಲೆಯಲ್ಲಿ ಅತ್ಯಂತ ಶೃದ್ಧಾ ಭಕ್ತಿಯಿಂದ ಮಹಾ ಶಿವರಾತ್ರಿಯನ್ನು ಆಚರಿಸಲಾಗುತ್ತಿದೆ. ಪುರಾಣ ಪ್ರಸಿದ್ಧ ಗೋಕರ್ಣದಲ್ಲಿ ಮಹಾಬಲೇಶ್ವರನಿಗೆ ಅಭಿಷೇಕ, ಪೂಜೆ ಸಲ್ಲಿಸಲು ಹೊರ ಜಿಲ್ಲೆ, ಹೊರ ರಾಜ್ಯಗಳಿಂದಲೂ ಸಹಸ್ರಾರು ಸಂಖ್ಯೆಯಲ್ಲಿ ಭಕ್ತರು ಆಗಮಿಸಿ ದರ್ಶನ ಪಡೆದಿದ್ದಾರೆ. ವಿಜಯನಗರ ಜಿಲ್ಲೆಯ ದಕ್ಷಿಣ ಕಾಶಿ ಎಂದು ಪ್ರಸಿದ್ಧವಾದ ವಿಶ್ವವಿಖ್ಯಾತ ಹಂಪಿಯ ವಿರೂಪಾಕ್ಷೇಶ್ವರ ದೇವಸ್ಥಾನದಲ್ಲಿ ಇಂದು ವಿರೂಪಾಕ್ಷೇಶ್ವರನಿಗೆ ಬಂಗಾರದ ಮುಕುಟದಿಂದ ಅಲಂಕಾರ  ಮಾಡಲಾಗಿತ್ತು. ಸಂಜೆಯ ಅಭಿಷೇಕದ ನಂತರ ವಿಜಯನಗರ ಸಾಮ್ರಾಜ್ಯದ ಸುಪ್ರಸಿದ್ಧ ಅರಸರಾಗಿದ್ದ ಶ್ರೀ ಕೃಷ್ಣದೇವರಾಯರು ನೀಡಿದ ರತ್ನ ಖಚಿತ ಮುಕುಟವನ್ನು ವಿರೂಪಾಕ್ಷೇಶ್ವರನಿಗೆ ಅಲಂಕಾರ ಮಾಡಲಾಗುತ್ತಿದೆ. ಉಡುಪಿ ಜಿಲ್ಲೆಯಾದ್ಯಂತ ಮಹಾ ಶಿವರಾತ್ರಿಯನ್ನು ಸಂಭ್ರಮದಿಂದ ಆಚರಿಸಲಾಗುತ್ತಿದ್ದು, ಜಿಲ್ಲೆಯಾದ್ಯಂತ ಶಿವನ ದೇವಾಲಯಗಳಲ್ಲಿ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಹಾಗೂ ಧಾರ್ಮಿಕ ವಿಧಿ ವಿಧಾನಗಳು ನಡೆಯುತ್ತಿವೆ.

<><> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <><>